**All India Radio: Bangalore**
**National Bulletin In Kannada**
**22.04.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**22.04.2026 7.35 am**

**<>><><*><><<>**

ಮುಖ್ಯಾಂಶಗಳು

**೧. ರಕ್ಷಣಾ ಕ್ಷೇತ್ರದಲ್ಲಿ ಅಭೂತಪೂರ್ವ ಪರಿವರ್ತನೆಗೆ ಭಾರತ ಸಾಕ್ಷಿ- ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೨. ಇರಾನ್ ಜೊತೆಗಿನ ಕದನ ವಿರಾಮ ಅನಿರ್ದಿಷ್ಟಾವಧಿಗೆ ವಿಸ್ತರಣೆ- ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಣೆ**

**೩. ಪಶ್ಚಿಮ ಬಂಗಾಳ, ತಮಿಳುನಾಡು ವಿಧಾನಸಭೆ ಚುನಾವಣೆ; ನಾಳೆ ಮತದಾನ; ಇಂದು ಮನೆ ಮನೆ ಪ್ರಚಾರ**

**೪. ಐಪಿಎಲ್ ಟಿ-೨೦ ಕ್ರಿಕೆಟ್; ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್ ತಂಡಕ್ಕೆ ಭರ್ಜರಿ ಜಯ**

**<>><><*><><<>**

ಭಾರತ ಮತ್ತು ಜರ್ಮನಿಯ ರಕ್ಷಣಾ ಕೈಗಾರಿಕಾ ಪರಿಸರ ವ್ಯವಸ್ಥೆಗಳ ನಡುವಿನ ವರ್ಧಿತ ಸಹಯೋಗಕ್ಕಾಗಿ ಬಲವಾದ ಧ್ವನಿಯನ್ನು ನೀಡುತ್ತಾ, ಆತ್ಮನಿರ್ಭರ ಭಾರತವು ಸಹ-ರಚನೆ, ಸಹ-ಅಭಿವೃದ್ಧಿ ಮತ್ತು ಸಹ-ನಾವೀನ್ಯತೆಗಾಗಿ ಒಂದು ಆಹ್ವಾನವಾಗಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ತಮ್ಮ ಮೂರು ದಿನಗಳ ಜರ್ಮನಿ ಭೇಟಿಯ ಮೊದಲ ದಿನವಾದ ನಿನ್ನೆ ರಕ್ಷಣಾ ಮತ್ತು ಭದ್ರತೆಯ ಕುರಿತಾದ ಜರ್ಮನ್ ಸಂಸದೀಯ ಸ್ಥಾಯಿ ಸಮಿತಿಯನ್ನು ಉದ್ದೇಶಿಸಿ ಮಾತನಾಡಿದ ರಾಜನಾಥ್ ಸಿಂಗ್, ಇಂದು ಜಗತ್ತು ಹೊಸ ಭದ್ರತಾ ಬೆದರಿಕೆಗಳನ್ನು ಎದುರಿಸುತ್ತಿದೆ ಮತ್ತು ತಾಂತ್ರಿಕ ರೂಪಾಂತರವು ಪರಿಸ್ಥಿತಿಯನ್ನು ಹೆಚ್ಚು ಸಂಕೀರ್ಣವಾಗಿಸಿದೆ ಎಂದು ಹೇಳಿದರು. ಬದಲಾಗುತ್ತಿರುವ ಪರಿಸರಕ್ಕೆ ಹೊಂದಿಕೊಳ್ಳುವ ಇಚ್ಛೆಯೊಂದಿಗೆ ಹೊಸ ವಿಧಾನವು ಈ ಸಮಯದ ಅಗತ್ಯವಾಗಿದೆ ಎಂದು ಅವರು ಪ್ರತಿಪಾದಿಸಿದರು. ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯ ನಾಯಕತ್ವದಲ್ಲಿ ಭಾರತವು ರಕ್ಷಣಾ ಕ್ಷೇತ್ರದಲ್ಲಿ ಅಭೂತಪೂರ್ವ ಪರಿವರ್ತನೆಗೆ ಸಾಕ್ಷಿಯಾಗುತ್ತಿದೆ ಮತ್ತು ಜರ್ಮನ್ ಉದ್ಯಮದೊಂದಿಗೆ ಹೆಚ್ಚಿನ ಪಾಲುದಾರಿಕೆಗಳು ಗಮನಾರ್ಹ ಪರಸ್ಪರ ಲಾಭಗಳನ್ನು ನೀಡುತ್ತವೆ ಎಂದು ಅವರು ತಿಳಿಸಿದರು. ತಮ್ಮ ಭೇಟಿಯ ವೇಳೆ ಸಚಿವ ರಾಜನಾಥ್ ಸಿಂಗ್, ಜರ್ಮನಿಯ ರಕ್ಷಣಾ ಸಚಿವ ಬೋರಿಸ್ ಪಿಸ್ಟೋರಿಯಸ್ ಮತ್ತು

ಇತರ ಹಿರಿಯ ನಾಯಕರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಈ ವೇಳೆ ಉಭಯ ರಾಷ್ಟ್ರಗಳ ನಡುವಿನ ಕಾರ್ಯತಂತ್ರದ ರಕ್ಷಣಾ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ರಕ್ಷಣಾ ಕೈಗಾರಿಕಾ ಸಹಕಾರ ಮಾರ್ಗಸೂಚಿ ಮತ್ತು ವಿಶ್ವ ಸಂಸ್ಥೆಯ ಶಾಂತಿ ಪಾಲನಾ ಕಾರ್ಯಚಾರಣೆಗಳ ತರಬೇತಿ ಸಹಕಾರ ಕುರಿತಾದ ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆ ಇದೆ. ಇದರ ಜೊತೆಗೆ ಮೆಕ್ ಇನ್ ಇಂಡಿಯಾ ಉಪಕ್ರಮದಡಿ ಜಂಟಿ ಅಭಿವೃದ್ಧಿ ಮತ್ತು ಸಹ ಉತ್ಪಾದನೆಯನ್ನು ಉತ್ತೇಜಿಸಲು ಜರ್ಮನಿಯ ರಕ್ಷಣಾ ಉದ್ಯಮದ ಪ್ರಮುಖ ಪ್ರತಿನಿಧಿಗಳೊಂದಿಗೆ ಸಚಿವರು ಸಂವಾದ ನಡೆಸಲಿದ್ದಾರೆ.

<>><><*><><<>

ಭಾರತೀಯ ಸೇನೆಯ ಸಾಮರ್ಥ್ಯ ಹೆಚ್ಚಿಸಲು ರಕ್ಷಣಾ ಸಚಿವಾಲಯ ಟಿ-೭೨ ಮತ್ತು ಟಿ-೯೦ ಯುದ್ಧ ಟ್ಯಾಂಕ್‌ಗಳಿಗಾಗಿ ಟ್ರಾಲ್ ಅಸೆಂಬ್ಲಿಗಳನ್ನು ಖರೀದಿಸಲು ಬಿಇಎಂಎಲ್ ಮತ್ತು ಎಲೆಕ್ಟ್ರೊ ನ್ಯೂಮ್ಯಾಟಿಕ್ಸ್ ಸಂಸ್ಥೆಗಳೊಂದಿಗೆ ೯೭೫ ಕೋಟಿ ರೂಪಾಯಿಗಳ ಒಪ್ಪಂದ ಮಾಡಿಕೊಂಡಿದೆ. ಡಿಆರ್‌ಡಿಒ ಅಭಿವೃದ್ಧಿ ಪಡಿಸಿರುವ ಈ ತಂತ್ರಜ್ಞಾನ ಯುದ್ಧ ಭೂಮಿಯಲ್ಲಿನ ಸಿಡಿಗುಂಡಿಗಳನ್ನು ನಿಷ್ಕ್ರೀಯಗೊಳಿಸಿ ಸೇನಾ ವಾಹನಗಳಿಗೆ ಸುರಕ್ಷಿತ ಹಾದಿ ನಿರ್ಮಿಸಲು ನೆರವಾಗಲಿದೆ ಎಂದು ರಕ್ಷಣಾ ಸಚಿವ ಮಾಹಿತಿ ನೀಡಿದೆ.

<>><><*><><<>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದು ಕರ್ನಾಟಕಕ್ಕೆ ಭೇಟಿ ನೀಡಲಿದ್ದಾರೆ. ಬೀದರ್‌ನ ಚೆನ್ನಬಸವ ದೇವರ ಸಮಾಧಿ ಬಳಿ ನಡೆಯಲಿರುವ ಡಾ.ಬಸವಲಿಂಗ ಸ್ವಾಮೀಜಿ ಅವರ ೭೫ನೇ ವರ್ಷದ ಸಂಭ್ರಮಾಚರಣೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಕಲಬುರಗಿಗೆ ತೆರಳಲಿರುವ ಅವರು, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಹತ್ತನೇ ಘಟಿಕೋತ್ಸವದಲ್ಲಿ ಘಟಿಕೋತ್ಸವ ಭಾಷಣ ಮಾಡಲಿದ್ದಾರೆ. ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

<>><><*><><<>

ಇರಾನ್ ಜೊತೆಗಿನ ಕದನ ವಿರಾಮವನ್ನು ಅನಿರ್ದಿಷ್ಟಾವಧಿಗೆ ವಿಸ್ತರಿಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಎರಡು ವಾರಗಳ ಕದನ ವಿರಾಮ ಇಂದು ಬೆಳಗ್ಗೆ ಮುಕ್ತಾಯಗೊಳ್ಳಲಿರುವ ಹಿನ್ನೆಲೆಯಲ್ಲಿ ಈ ಘೋಷಣೆ ಹೊರಬಿದ್ದಿದೆ. ಸಾಮಾಜಿಕ ಜಾಲತಾಣದಲ್ಲಿ ಟ್ರಂಪ್, ಪಾಕಿಸ್ತಾನದ ಕೋರಿಕೆಯ ಮೇರೆಗೆ ಈ ಕ್ರಮ ಕೈಗೊಳ್ಳುತ್ತಿರುವುದಾಗಿ ಹೇಳಿದ್ದಾರೆ. ಆದಾಗ್ಯೂ, ಇರಾನ್‌ನ ಬಂದರುಗಳು ಮತ್ತು ಕರಾವಳಿಯ ಮೇಲೆ ಅಮೆರಿಕ ನೌಕಾಪಡೆಯ ದಿಗ್ಬಂಧನವನ್ನು ಮುಂದುವರಿಸುವುದಾಗಿಯೂ ಅವರು ಹೇಳಿದ್ದಾರೆ. ಇರಾನ್ "ಏಕೀಕೃತ ಪ್ರಸ್ತಾವನೆ" ಮಂಡಿಸುವವರೆಗೆ ಇರಾನ್ ಬಂದರುಗಳ ದಿಗ್ಬಂಧನ ಮುಂದುವರಿಯುತ್ತದೆ ಎಂದು

ಅವರು ತಿಳಿಸಿದ್ದಾರೆ. ಇದನ್ನು ಇರಾನ್ ನಾಯಕರು ಯುದ್ಧದ ಕ್ರಮ ಎಂದು ಕರೆದಿದ್ದಾರೆ. ಇರಾನ್‌ನ ಹಿರಿಯ ನಾಯಕರಿಂದ ತಕ್ಷಣದ ಯಾವುದೇ ಪ್ರತಿಕ್ರಿಯೆ ಬಂದಿಲ್ಲ. ಆದರೆ ಇರಾನ್‌ನ ಕ್ರಾಂತಿಕಾರಿ ಗಾರ್ಡ್‌ಗಳೊಂದಿಗೆ ಸಂಯೋಜಿತವಾಗಿರುವ ತಸ್ನಿಮ್ ಸುದ್ದಿ ಸಂಸ್ಥೆ, ಇರಾನ್, ಕದನ ವಿರಾಮ ವಿಸ್ತರಣೆಯನ್ನು ಕೇಳಿಲ್ಲ ಮತ್ತು ಬಲವಂತವಾಗಿ ಅಮೆರಿಕ ದಿಗ್ಬಂಧನವನ್ನು ಮುರಿಯಲು ಪದೇ ಪದೆ ಬೆದರಿಕೆ ಹಾಕಿದೆ ಎಂದು ಹೇಳಿದೆ. ಇದಕ್ಕೂ ಮೊದಲು, ಎರಡನೇ ಸುತ್ತಿನ ಮಾತುಕತೆಗಾಗಿ ಅಮೆರಿಕ ಉಪಾಧ್ಯಕ್ಷ ಜೆ.ಡಿ. ವ್ಯಾನ್ಸ್ ಇಸ್ಲಾಮಾಬಾದ್‌ಗೆ ಭೇಟಿ ನೀಡಬೇಕಿತ್ತು. ಆದರೆ, ಅದನ್ನು ಶ್ವೇತಭವನ ಮುಂದೂಡಿದೆ.

**<>><><*><><<>**

ಪಹಲ್ಗಾಮ್ ಭಯೋತ್ಪಾದಕ ದಾಳಿ ನಡೆದು ಇಂದಿಗೆ ಒಂದು ವರ್ಷ ಕಳೆದ ಹಿನ್ನೆಲೆ ಭಾರತೀಯ ಸೇನೆಯು, ಭಯೋತ್ಪಾದನೆಯ ವಿರುದ್ಧ ಹೋರಾಡುವ ಸಂಕಲ್ಪವನ್ನು ದೃಢಪಡಿಸಿದೆ. ಕಳೆದ ವರ್ಷ ಏಪ್ರಿಲ್ ೨೨ ರಂದು, ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ೨೬ ಮುಗ್ಧ ಪ್ರವಾಸಿಗರನ್ನು ಹತ್ಯೆ ಮಾಡಿದ್ದರು. ಈ ಹೇಯ ಕೃತ್ಯವು ರಾಷ್ಟ್ರವನ್ನು ಬೆಚ್ಚಿಬೀಳಿಸಿತು ಮತ್ತು ಪ್ರಪಂಚದಾದ್ಯಂತದ ಸರ್ಕಾರಗಳು ಮತ್ತು ನಾಯಕರಿಂದ ಖಂಡನೆಗೆ ಗುರಿಯಾಯಿತು. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ, ಭಾರತೀಯ ಸಶಸ್ತ್ರ ಪಡೆಗಳು ಕಳೆದ ವರ್ಷ ಮೇ ೬ ಮತ್ತು ೭ ರ ಮಧ್ಯರಾತ್ರಿ ಆಪರೇಷನ್ ಸಿಂಧೂರ್ ಪ್ರಾರಂಭಿಸಿದವು. ಆಪರೇಷನ್ ಸಿಂಧೂರ್ ಅಡಿಯಲ್ಲಿ, ಭಾರತೀಯ ಸಶಸ್ತ್ರ ಪಡೆಗಳು ನಡೆಸಿದ ಸಂಘಟಿತ ದಾಳಿಗಳು, ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಒಂಬತ್ತು ಭಯೋತ್ಪಾದಕ ಶಿಬಿರಗಳನ್ನು ನಿಖರವಾಗಿ ಹೊಡೆದುರುಳಿಸಿ, ೧೦೦ ಕ್ಕೂ ಹೆಚ್ಚು ಭಯೋತ್ಪಾದಕರು, ಅವರ ತರಬೇತುದಾರರು, ನಿರ್ವಾಹಕರು ಮತ್ತು ಸಹಚರರನ್ನು ಸಂಹರಿಸಿದ್ದವು. ಹೆಚ್ಚಿನ ಭಯೋತ್ಪಾದಕರು ಜೈಶ್-ಎ-ಮೊಹಮ್ಮದ್, ಲಷ್ಕರ್-ಎ-ತೈಬಾ ಮತ್ತು ಹಿಜ್ಬುಲ್ ಮುಜಾಹಿದ್ದೀನ್‌ನಂತಹ ಸಂಘಟನೆಗಳಿಗೆ ಸೇರಿದವರಾಗಿದ್ದರು. ಈ ಕಾರ್ಯಾಚರಣೆಯು ಭಯೋತ್ಪಾದಕರು ಮತ್ತು ಅವರ ಅಡಗುತಾಣಗಳಿಗೆ ಗರಿಷ್ಠ ಹಾನಿಯನ್ನುಂಟುಮಾಡಿತು. ಬೈಸರನ್ ಕಣಿವೆಯ ಹುಲ್ಲುಗಾವಲುಗಳಲ್ಲಿ ನಡೆದ ದಾಳಿಯಲ್ಲಿ ಪ್ರಾಣ ಕಳೆದುಕೊಂಡವರಿಗೆ ಗೌರವ ಸಲ್ಲಿಸಲು, ಪಹಲ್ಗಾಮ್‌ನ ಬೆಟ್ಟದಲ್ಲಿ ಸ್ಮಾರಕ ನಿರ್ಮಿಸಲಾಗಿದೆ.

**<>><><*><><<>**

ತಮಿಳುನಾಡು ವಿಧಾನಸಭೆ ಚುನಾವಣೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ನಿನ್ನೆ ತೆರೆ ಬಿದ್ದಿದೆ. ಇಂದು ಅಭ್ಯರ್ಥಿಗಳು ಮತ್ತು ನಾಯಕರು ಮನೆ-ಮನೆಗೆ ತೆರಳಿ ಪ್ರಚಾರದಲ್ಲಿ ತೊಡಗಲಿದ್ದಾರೆ. ತಮಿಳುನಾಡಿನ ಎಲ್ಲಾ ಕ್ಷೇತ್ರಗಳಿಗೆ ಏಕಹಂತದಲ್ಲಿ ಹಾಗೂ ಪಶ್ಚಿಮ ಬಂಗಾಳದ ಮೊದಲ ಹಂತದ ಕ್ಷೇತ್ರಗಳಿಗೆ ನಾಳೆ ಮತದಾನ ನಡೆಯಲಿದೆ. ಬಹಿರಂಗ ಪ್ರಚಾರಕ್ಕೆ ಕೊನೆಯ ದಿನವಾದ ನಿನ್ನೆ ಪಶ್ಚಿಮ ಬಂಗಾಳದಲ್ಲಿ ಕೇಂದ್ರ

ಗೃಹ ಸಚಿವ ಮತ್ತು ಬಿಜೆಪಿ ಹಿರಿಯ ನಾಯಕ ಅಮಿತ್ ಶಾ, ಪಶ್ಚಿಮ ಬರ್ಧಮಾನ್ ಜಿಲ್ಲೆಯ ಕುಲ್ಟಿ ಮತ್ತು ಸಿಲಿಗುರಿಯಲ್ಲಿ ಬೃಹತ್ ರ್‍ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಬಿಜೆಪಿ ನಾಯಕಿ ರೇಖಾ ಗುಪ್ತಾ ಅವರು ಅಸನ್ಸೋಲ್‌ನಲ್ಲಿ ನಡೆದ ರೋಡ್ ಶೋನಲ್ಲಿ ಪಾಲ್ಗೊಂಡಿದ್ದರು. ಮತ್ತೊಂದೆಡೆ, ತೃಣಮೂಲ ಕಾಂಗ್ರೆಸ್ ಅಧ್ಯಕ್ಷೆ ಹಾಗೂ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಹಲ್ದಿಯಾದಲ್ಲಿ ಸಾರ್ವಜನಿಕ ಸಭೆ ನಡೆಸಿ, ಪಕ್ಷದ ಅಭ್ಯರ್ಥಿಗಳ ಪರ ಮತಯಾಚಿಸಿದರು. ಕಾಂಗ್ರೆಸ್ ಮತ್ತು ಎಡಪಕ್ಷಗಳು ಸೇರಿದಂತೆ ಇತರ ಪಕ್ಷಗಳ ನಾಯಕರು ಸಹ ತಮ್ಮ ಅಭ್ಯರ್ಥಿಗಳ ಪರವಾಗಿ ರಾಜ್ಯಾದ್ಯಂತ ಪ್ರಚಾರ ನಡೆಸಿದರು. ತಮಿಳುನಾಡಿನಲ್ಲಿ ಕೇಂದ್ರ ಸಚಿವ ಪಿಯೂಷ್ ಗೋಯಲ್ ಪ್ರಚಾರ ನಡೆಸಿದರು. ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಪಳನಿಸ್ವಾಮಿ ಸೇಲಂನಲ್ಲಿ ಸಾರ್ವಜನಿಕ ಸಭೆ ಉದ್ದೇಶಿಸಿ ಮಾತನಾಡಿದರು.

<>><><*><><<>

೨೦೨೫-೨೬ರ ಆರ್ಥಿಕ ವರ್ಷದಲ್ಲಿ ಭಾರತದ ಸಮುದ್ರಾಹಾರ ರಫ್ತು ಎಪ್ಪತ್ತೆರಡು ಸಾವಿರದ ಮುನ್ನೂರು ಕೋಟಿ ರೂಪಾಯಿಗಳಿಗೆ ಏರಿದೆ. ಸಮುದ್ರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರ ಬಿಡುಗಡೆ ಮಾಡಿದ ತಾತ್ಕಾಲಿಕ ಮಾಹಿತಿಯ ಪ್ರಕಾರ, ದೇಶದ ಸಮುದ್ರಾಹಾರ ರಫ್ತು ಪ್ರಮಾಣವು ೧೯ ಲಕ್ಷ ಮೆಟ್ರಿಕ್ ಟನ್‌ಗಳನ್ನು ತಲುಪಿದೆ. ಸೀಗಡಿ, ನಲವತ್ತೇಳು ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಕೊಡುಗೆ ನೀಡಿದೆ. ಇದು ಒಟ್ಟು ರಫ್ತು ಗಳಿಕೆಯ ಮೂರನೇ ಎರಡರಷ್ಟು ಪಾಲನ್ನು ಹೊಂದಿದೆ. ಸೀಗಡಿಯ ಸಾಗಣೆಯು ಪ್ರಮಾಣದಲ್ಲಿ ಶೇಕಡ ೪.೬ ಮತ್ತು ಮೌಲ್ಯದಲ್ಲಿ ಶೇಕಡ ೬.೩೫ ರಷ್ಟು ಹೆಚ್ಚಾಗಿದೆ ಎಂದು ಪ್ರಾಧಿಕಾರ ಹೇಳಿದೆ.

<>><><*><><<>

ಹೈದರಾಬಾದ್‌ನ ರಾಜೀವ್‌ಗಾಂಧಿ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಸನ್‌ರೈಸರ್ಸ್ ಹೈದರಾಬಾದ್ ತಂಡ ೪೭ ರನ್‌ಗಳಿಂದ ಭರ್ಜರಿ ಜಯ ಸಾಧಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಸನ್‌ರೈಸರ್ಸ್ ಹೈದರಾಬಾದ್ ನಿಗದಿತ ೨೦ ಓವರ್‌ಗಳಿಗೆ ೨ ವಿಕೆಟ್ ನಷ್ಟಕ್ಕೆ ೨೪೨ ರನ್ ಗಳಿಸಿದೆ. ಸನ್‌ರೈಸರ್ಸ್ ಹೈದರಾಬಾದ್ ಪರ ಅಭಿಷೇಕ್ ಶರ್ಮಾ ೬೮ ಎಸೆತಗಳಿಗೆ ೧೩೫ ರನ್ ಸಿಡಿಸಿದರು. ಗೆಲುವಿನ ಗುರಿ ಬೆನ್ನತ್ತಿದ ಡೆಲ್ಲಿ ಕ್ಯಾಪಿಟಲ್ಸ್ ನಿಗದಿತ ೨೦ ಓವರ್‌ಗಳಿಗೆ ೯ ವಿಕೆಟ್ ನಷ್ಟಕ್ಕೆ ೧೯೫ ಗಳಿಸಲಷ್ಟೇ ಶಕ್ತವಾಯಿತು. ಸನ್‌ರೈಸರ್ಸ್ ಹೈದರಾಬಾದ್ ಪರ ಇಶಾನ್ ಮಲಿಂಗಾ ೪ ವಿಕೆಟ್ ಕಬಳಿಸಿದರು. ಅಭಿಷೇಕ್ ಶರ್ಮಾ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಲಖ್ನೋದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕಾನ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ಲಖ್ನೋ ಸೂಪರ್ ಜೈಂಟ್ಸ್ ಮತ್ತು ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ.

<>><><*><><<>

ಮಹಿಳಾ ಕ್ರಿಕೆಟ್‌ನಲ್ಲಿ, ಭಾರತ ಮತ್ತು ದಕ್ಷಿಣ ಆಫ್ರಿಕಾ ತಂಡಗಳ ನಡುವಿನ ಐದು ಪಂದ್ಯಗಳ ಸರಣಿಯ ಮೂರನೇ ಟಿ-೨೦ ಅಂತಾರಾಷ್ಟ್ರೀಯ ಪಂದ್ಯ ಇಂದು ಜೋಹಾನ್ಸ್‌ಬರ್ಗ್‌ನ ವಾಂಡರರ್ಸ್ ಕ್ರೀಡಾಂಗಣದಲ್ಲಿ ನಡೆಯಲಿದೆ.  ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯ ಗಂಟೆ ೩೦ ನಿಮಿಷಕ್ಕೆ ಆರಂಭವಾಗಲಿದೆ.  ದಕ್ಷಿಣ ಆಫ್ರಿಕಾ ಮಹಿಳಾ ತಂಡ, ಮೊದಲ ಎರಡು ಪಂದ್ಯಗಳಲ್ಲಿ ಜಯ ಸಾಧಿಸಿ ಸರಣಿಯಲ್ಲಿ ಮುನ್ನಡೆ ಸಾಧಿಸಿದೆ.  ಭಾರತದ ಮಹಿಳಾ ತಂಡವು ಮೂರನೇ ಪಂದ್ಯದಲ್ಲಿ ಗೆಲುವು ಸಾಧಿಸಿ ಸರಣಿಯನ್ನು ಉಳಿಸಿಕೊಳ್ಳಲು ಪ್ರಯತ್ನಿಸಲಿದೆ. ನಾಲ್ಕನೇ ಪಂದ್ಯ ಶನಿವಾರ ನಡೆಯಲಿದೆ.  ಅಂತಿಮ ಪಂದ್ಯ ಇದೇ ೨೭ ರಂದು ಬೆನೋನಿಯ ವಿಲ್ಲೋಮೂರ್ ಪಾರ್ಕ್‌ನಲ್ಲಿ ನಡೆಯಲಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨.೩೦ ಕ್ಕೆ ><><<>**